## ಮಾನ್ಯ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ.ಪ್ರತಾಪ್‌ಸಿಂಹ ನಾಯಕ್ ರವರು ನಿಯಮ 330 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಉತ್ತರ

### ಸೂಚನೆ

ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಗರ ಪ್ರಾಧಿಕಾರದ ಮಹಾಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯಿಂದಾಗಿ 2017ರ ಪೂರ್ವದ ಭೂಪರಿವರ್ತಿತ ಹಾಗೂ ನಮೂನೆ-3 ರಂತೆ ಗುರುತಿಸಿರುವ ನಿವೇಶನಗಳನ್ನು ಹೊಂದಿರುವ ಖಾತೆದಾರರಿಗೆ ಹೊಸ ಮನೆ ನಿರ್ಮಾಣಕಕಾಗಿ ಕಟ್ಟಡ ಪರವಾನಗಿ ದೊರೆಯದೆ ಮತ್ತು ಈಗಾಗಲೇ ವಾಸವಿರುವ ಮನೆಗಳ ನವೀಕರಣ ಅಥವಾ ವಿಸ್ತರಣೆಗೆ ಕೂಡ ಪರವಾನಗಿ ದೊರೆಯದೆ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗಿರುವ ಗಂಭೀರ ಸಮಸ್ಯೆ ಕುರಿತು.

### ಉತ್ತರ:

ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಗರ ಪ್ರಾಧಿಕಾರದ ಮಹಾಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯಿಂದಾಗಿ 2017ರ ಪೂರ್ವದ ಭೂಪರಿವರ್ತಿತ ಹಾಗೂ ನಮೂನೆ-3 ರಂತೆ ಗುರುತಿಸಿರುವ ನಿವೇಶನಗಳನ್ನು ಹೊಂದಿರುವ ಖಾತೆದಾರರಿಗೆ ಹೊಸ ಮನೆ ನಿರ್ಮಾಣಕ್ಕಾಗಿ ಕಟ್ಟಡ ಪರವಾನಗಿ ದೊರೆಯದೆ ಮತ್ತು ಈಗಾಗಲೇ ವಾಸವಿರುವ ಮನೆಗಳ ನವೀಕರಣ ಅಥವಾ ವಿಸ್ತರಣೆಗೆ ಕೂಡ ಪರವಾನಗಿ ದೊರೆಯದೆ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಭೂ ಪರಿವರ್ತನೆಗೊಂಡ ಒಟ್ಟು ವಿಸ್ತೀರ್ಣದ ಜಮೀನಿಗೆ ವಿನ್ಯಾಸ ನಕ್ಷೆಗೆ ತಾಂತ್ರಿಕ ಅನುಮೋದನೆ ಮತ್ತು ವಿನ್ಯಾಸ ನಕ್ಷೆ ಅನುಮೋದನೆಗೊಂಡು ಸ್ಥಳೀಯ ಸಂಸ್ಥೆಯಲ್ಲಿ ಖಾತೆ(ನಮೂನೆ-3) ತೆರೆದಿರುವ ಜಮೀನಿನಲ್ಲಿ ಕಟ್ಟಡ ಪರವಾನಿಗೆಗೆ ತಾಂತ್ರಿಕ ಅಭಿಪ್ರಾಯ ನೀಡಲು ಮಹಾಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯಿಂದ ಯಾವುದೇ ಸಮಸ್ಯೆ ಉಂಟಾಗುವುದಿಲ್ಲ.

ಮಹಾಯೋಜನೆಯನ್ನು ಸಿದ್ಧಪಡಿಸುವ ಪ್ರಕ್ರಿಯೆ ಜಾರಿಯಲ್ಲಿದ್ದು, ಸರ್ಕಾರದ ಪತ್ರ ಸಂಖ್ಯೆ:ನಅಇ 319 ಮೈಅಪ್ರಾ 2022(ಇ), ದಿನಾಂಕ:22.12.2022 ರ ಪತ್ರದಲ್ಲಿ ಮಹಾಯೋಜನೆ ಅನುಮೋದನೆಯಾಗುವವರೆಗೆ ತಾಂತ್ರಿಕ ಅಭಿಪ್ರಾಯ ಮತ್ತು ಕಟ್ಟಡ ಪರವಾನಗಿಗಳನ್ನು ಸ್ಥಳೀಯ ಸಂಸ್ಥೆಯಿಂದ ನಿಯಮಾನುಸಾರ ನೀಡಲು ಅನುಮತಿ ನೀಡಲಾಗಿದೆ(ಅನುಬಂಧ-1 ರಲ್ಲಿರಿಸಿದೆ).

ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾಗಿ ಮಹಾಯೋಜನೆ ಅನುಮೋದನೆಯಾಗಿರುವ ಪ್ರದೇಶಗಳಲ್ಲಿ ದಿನಾಂಕ:19.10.2013 ರ ಮುಂಚಿತವಾಗಿ ಬಂದಿರುವ ಎಲ್ಲಾ ತರಹದ ಅನಧಿಕೃತ ಅಭಿವೃದ್ಧಿಗಳನ್ನು ಸಕ್ರಮಗೊಳಿಸಲು ಸರ್ಕಾರವು ಅಧಿಸೂಚನೆ ಸಂಖ್ಯೆ:ನಅಇ 556 ಮೈಅಪ್ರಾ 2013(1) ದಿನಾಂಕ:28.05.2014 ರಲ್ಲಿ Karnataka Town and Country Planning (Regularization of unauthorized Development of Constructions) Rules, 2014ನ್ನು ಜಾರಿಗೆ ತಂದಿರುತ್ತದೆ.

ಸದರಿ ನಿಯಮಕ್ಕೆ ಘನ ಸರ್ವೋಚ್ಚ ನ್ಯಾಯಾಲಯವು ಪ್ರಕರಣ ಸಂಖ್ಯೆ:SLP© No. 956-957/2017 ರಲ್ಲಿ ದಿನಾಂಕ:13.01.2017 ರಂದು ನೀಡಿರುವ ಮಧ್ಯಂತರ ಆದೇಶ ರಲ್ಲಿ ತಡೆಯಾಜ್ಞೆ ನೀಡಿರುತ್ತದೆ. ಪ್ರಕರಣವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುತ್ತದೆ.

********

ಕಡತ ಸಂಖ್ಯೆ: ನಅಇ 479 ಮೈಅಪ್ರಾ 2024

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು
ನಗರ ಯೋಜನೆ ಸಚಿವರು